# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 167

ಮಾನ್ಯ ಸದಸ್ಯರ ಹೆಸರು : ಶ್ರೀ ಕೆ.ಎ.ತಿಪ್ಪೇಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 13-9-2021

ಉತ್ತರಿಸುವ ಸಚಿವರು : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ತುಮಕೂರು ಜಿಲ್ಲೆಯ ಶಿರಾ ತಾಲ್ಲೂಕು ಕೊರೋನಾ 2ನೇ ಅಲೆಯ ಸಂದರ್ಭದಲ್ಲಿ ಸೋಂಕಿಗೆ ಒಳಗಾದ್ದವರ ಮತ್ತು ಅದರಿಂದ ಸಾವಿಗೀಡಾದವರ ಸಂಖ್ಯೆಯ ಪ್ರಮಾಣವು ಜಿಲ್ಲೆಯಲ್ಲೇ ಎರಡನೆಯ ಸ್ಥಾನದಲ್ಲಿತ್ತು ಎಂಬುದು ನಿಜವೇ; | ಕೊರೋನಾ 2ನೇ ಅಲೆಯ ಸಂದರ್ಭದಲ್ಲಿ ತುಮಕೂರು ಜಿಲ್ಲೆಯಲ್ಲಿರುವ 10 ತಾಲ್ಲೂಕುಗಳ ಪೈಕಿ ಶಿರಾ ತಾಲ್ಲೂಕಿನಲ್ಲಿ ದಿನಾಂಕ: 01-03-2021 ರಿಂದ 31-08-2021 ರವರೆಗೆ ಕೊರೋನಾ ಸೋಂಕಿತರ ಒಟ್ಟು 10023 ಪ್ರಕರಣಗಳು ಕಂಡು ಬಂದಿದ್ದು, ಸೋಂಕಿತ ಪ್ರಮಾಣವು ತುಮಕೂರು ತಾಲ್ಲೂಕಿನ ನಂತರದ 2ನೇ ಸ್ಥಾನವು ಶಿರಾ ತಾಲ್ಲೂಕಿನದ್ದಾಗಿರುತ್ತದೆ. 52 ಮೃತಪಟ್ಟ ಪ್ರಕರಣಗಳು ವರದಿಯಾಗಿದ್ದು, ಮೃತಪಟ್ಟವರ ಸಂಖ್ಯೆಯಲ್ಲಿ ತುಮಕೂರು ಜಿಲ್ಲೆಗೆ 04 ನೇ ಸ್ಥಾನದಲ್ಲಿರುತ್ತದೆ. |
| ಆ | ಆ ಸಂದರ್ಭದಲ್ಲಿ ಸೋಂಕಿನ ಪತ್ತೆಗಾಗಿ ಸರ್ಕಾರ ಆರ್‌ಟಿಪಿಸಿಆರ್ ಟೆಸ್ಟ್ ಸೆಂಟರ್, ಆಕ್ಸಿಜನ್ ಪ್ಲಾಂಟ್‌ಗಳನ್ನು ಮಂಜೂರು ಮಾಡಿದ್ದು ಸರ್ಕಾರದ ಗಮನದಲ್ಲಿದೆಯೇ; | ಹೌದು. |
| ಇ | ಕೊರೋನಾ 2ನೇ ಅಲೆಯ ಸೋಂಕಿನ ಪ್ರಮಾಣ ತಗ್ಗುತ್ತಿದ್ದಂತೆಯೇ ಆಕ್ಸಿಜನ್ ಪ್ಲಾಂಟ್ ನಿರ್ಮಾಣ ಕಾರ್ಯ ಮುಂದುವರಿಯದೆ, ಯಂತ್ರಗಳ ಅಳವಡಿಕೆ ಕಾರ್ಯ ಸ್ಥಗಿತಗೊಂಡಿರಲು ಕಾರಣಗಳೇನು; | ಕೋವಿಡ್-19ರ ಎರಡನೇ ಅಲೆಯ ಸಮಯದಲ್ಲಿ, ಸರ್ಕಾರದ ಆದೇಶ ಸಂಖ್ಯೆ: ಆಕುಕ 390 ಸಿಜಿಎಂ 2020 ದಿನಾಂಕ:17.04.2021 ರಲ್ಲಿ ರಾಜ್ಯ ಸರ್ಕಾರದ ವತಿಯಿಂದ ಶಿರಾ ಸಾರ್ವಜನಿಕ ಆಸ್ಪತ್ರೆಯಲ್ಲಿ ರೂ.83.00 ಲಕ್ಷಗಳ ಅಂದಾಜು ವೆಚ್ಚದಲ್ಲಿ 390 LPM (PSA) ಸಾಮರ್ಥ್ಯದ ಆಕ್ಸಿಜನ್ ಉತ್ಪಾದನಾ ಘಟಕವನ್ನು ಸ್ಥಾಪಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.<br>ಶಿರಾ ಸಾರ್ವಜನಿಕ ಆಸ್ಪತ್ರೆಯಲ್ಲಿ 390 LPM (PSA) ಸಾಮರ್ಥ್ಯದ ಆಕ್ಸಿಜನ್ ಉತ್ಪಾದನಾ ಘಟಕವನ್ನು ಸ್ಥಾಪಿಸಲು M/s. Helix corporation, Bangalore ಇವರಿಗೆ ದಿ:11.05.2021 ರಲ್ಲಿ ಗುತ್ತಿಗೆಯನ್ನು ನೀಡಲಾಗಿದ್ದು, ಘಟಕವನ್ನು ಸ್ಥಾಪಿಸಲು ಈಗಾಗಲೇ ಅವಶ್ಯಕವಿರುವ ಸಿವಿಲ್, ಎಲೆಕ್ಟ್ರಿಕಲ್ ಹಾಗು ಆಕ್ಸಿಜನ್ ಪೈಪ್ ಲೈನ್ ಅಳವಡಿಸುವ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿರುತ್ತದೆ.<br>ಮುಂದುವರೆದು, ಆಕ್ಸಿಜನ್ ಪ್ಲಾಂಟ್‌ನ ಕಂಪ್ರೆಸರ್ ಯುನಿಟ್ ಈಗಾಗಲೇ ಪೂರೈಕೆಯಾಗಿದ್ದು, ಉಳಿಕೆ ಯಂತ್ರೋಪಕರಣಗಳು ಸರಬರಾಜು ಹಂತದಲ್ಲಿದ್ದು, ಮುಂದಿನ 10 ದಿನಗಳೊಳಗಾಗಿ ಆಕ್ಸಿಜನ್ ಪ್ಲಾಂಟ್ ಸ್ಥಾಪಿಸಿ ಚಾಲನೆಗೊಳಿಸಲು ಉದ್ದೇಶಿಸಲಾಗಿದೆ. |

ಆಕುಕ 93 ಎಸ್‌ಎಂಎಂ 2021

(ಡಾ: ಕೆ.ಸುಧಾಕರ್)

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು